# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಯೋಗೇಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಿಗೇರಿ ಗ್ರಾಮ ಪಂಚಾಯತಿ, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 145 ಗ್ರಾಪಂಕಾ 2015, ದಿನಾಂಕ 25.04.2015
2) ಮಾನ್ಯ ಉಪಲೋಕಾಯುಕ್ತ ರವರ ವರದಿ ಸಂಖ್ಯೆ: UPLOK-1/DE-240/2015/ARE-9, ದಿನಾಂಕ: 12.01.2017
3) ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 30.01.2017
4) ಶ್ರೀ ಯೋಗೇಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಿಗೇರಿ ಗ್ರಾಮ ಪಂಚಾಯತಿ, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ, ದಿನಾಂಕ 24.01.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ, ಶ್ರೀ ಯೋಗೇಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಿಗೇರಿ ಗ್ರಾಮ ಪಂಚಾಯತಿ, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರು ಕಣ್ಣಿಗೇರಿ ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅವಧಿಯಲ್ಲಿ ಗ್ರಾಮ ಪಂಚಾಯತಿ ಕಾರ್ಯಾಲಯದ ನಾಮಫಲಕದ ಸಲುವಾಗಿ ರೂ.23,000/- ಗಳನ್ನು ಖರ್ಚು ಭರಿಸಿ, ಬೋಗಸ್ ದಾಖಲೆ ಸೃಷ್ಠಿ ಮಾಡಿರುವ ಬಗ್ಗೆ ದೂರು ದಾಖಲಾದ ಹಿನ್ನೆಲೆಯಲ್ಲಿ ತನಿಖೆ ನಡೆಸಲಾಗಿ, ಸದರಿ ದೂರಿನ ಕುರಿತು ಇಲಾಖಾ ವಿಚಾರಣೆ ನಡೆಸಲು ಸರ್ಕಾರದಿಂದ ದಿನಾಂಕ 24.04.2015 ರ ಸರ್ಕಾರದ ಆದೇಶದಲ್ಲಿ ಕ.ನಾ.ಸೇ.ನಿ.1957 ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ (2) ರಲ್ಲಿ, ಸದರಿ ಪ್ರಕರಣದ ಕುರಿತು ವಿಚಾರಣೆ ನಡೆಸಲಾಗಿ, ಸದರಿ ನೌಕರರು ಗ್ರಾಮ ಪಂಚಾಯತಿ ಕಾರ್ಯಾಲಯದ ನಾಮಫಲಕ ಖರೀದಿ ಪ್ರಕ್ರಿಯೆಯಲ್ಲಿ ಕರ್ತವ್ಯ ಲೋಪ ಎಸಗಿದ್ದು, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆಯ ನಿಯಮಗಳನ್ನು ಪಾಲಿಸದೆ ಇರುವುದು ಕಂಡುಬಂದಿದ್ದು, ಆರೋಪಗಳು ಸಾಬೀತಾಗಿದ್ದು ಕ.ನಾ.ಸೇ.(ನಡತೆ) ನಿಯಮಗಳು 1966 ರ ನಿಯಮ 3(i) ಮತ್ತು (iii) ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವುದಾಗಿ ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ಶ್ರೀ ಯೋಗೇಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಿಗೇರಿ ಗ್ರಾಮ ಪಂಚಾಯತಿ, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಹಿಡಿಯುವ ಹಾಗೂ ರೂ.22,402/- ಗಳನ್ನು ಸದರಿ ನೌಕರರ ವೇತನ ಹಾಗೂ ಭತ್ಯೆಗಳಿಂದ ವಸೂಲು ಮಾಡುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ನಿಯಮಾನುಸಾರ ಆರೋಪಿತ ನೌಕರರಿಗೆ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು ಈ ನೋಟಿಸಿಗೆ ಸದರಿ ನೌಕರರು ಮೇಲೆ ಓದಲಾದ (4) ರಲ್ಲಿ ಸದರಿ ನೌಕರರು ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಸರ್ಕಾರವು ಪರಿಶೀಲಿಸಿ, ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸಿನಲ್ಲಿ ಎತ್ತಿರುವ ಆಕ್ಷೇಪಣೆಗಳಿಗೆ ಸಂಬಂಧ ಪಟ್ಟಂತೆ ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ ಹಾಗೂ ಸದರಿ ನೌಕರರುಗಳ ವಿರುದ್ಧದ ಆರೋಪವು ಸಾಬೀತಾಗಿರುವುದೆಂದು ನಿರ್ಣಯಿಸಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿದೆ. ಆದುದರಿಂದ ಆಪಾದಿತರ ಆಕ್ಷೇಪಣೆಗಳು ಸಮಂಜಸವಾಗಿ ಇರುವುದಿಲ್ಲವಾದ್ದರಿಂದ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಸದರಿ ನೌಕರರುಗಳಿಗೆ ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿನ ಶಿಫಾರಸ್ಸಿನಂತೆ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

*ಮುಂದುವರೆದಿದೆ. . .*

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 54 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 24.10.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, 1957 ರನ್ವಯ ಶ್ರೀ ಯೋಗೇಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಿಗೇರಿ ಗ್ರಾಮ ಪಂಚಾಯತಿ, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ಇವರ ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಹಿಡಿಯುವ ಹಾಗೂ ರೂ.22,402/- ಗಳನ್ನು ಸದರಿ ನೌಕರರ ವೇತನ ಹಾಗೂ ಭತ್ಯೆಗಳಿಂದ ವಸೂಲು ಮಾಡುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾ ಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಉತ್ತರ ಕನ್ನಡ ಜಿಲ್ಲಾ ಪಂಚಾಯತಿ, ಕಾರವಾರ.
5) ಕಾರ್ಯನಿರ್ವಾಹಕ ಅಧಿಕಾರಿ, ಯಲ್ಲಾಪುರ ತಾಲ್ಲೂಕು ಪಂಚಾಯತಿ, ಯಲ್ಲಾಪುರ, ಉತ್ತರ ಕನ್ನಡ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
6) ಶ್ರೀ ಯೋಗೇಂದ್ರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಣ್ಣಿಗೇರಿ ಗ್ರಾಮ ಪಂಚಾಯತಿ, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ.
7) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.